ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 1511(1834)
ಸದಸ್ಯರ ಹೆಸರು : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 22.03.2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 01.08.2008ರ ನಂತರ ನೇಮಕಾತಿ ಹೊಂದಿರುವ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಬೋಧಕ ವರ್ಗ ಮುಖ್ಯೋಪಾಧ್ಯಾಯರು ಹಾಗೂ ಪ್ರಾಚಾರ್ಯರಿಗೆ ಎಕ್ಸ್‌ಗ್ರೇಷಿಯಾ ನೀಡುವ ಕುರಿತು ಸರ್ಕಾರದ ಕ್ರಮವೇನು; | ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಎಸ್‌ಎಲ್‌ಬಿ 2016, ದಿನಾಂಕ:23/07/2018ರನ್ವಯ ದಿನಾಂಕ:01/08/2008ರ ನಂತರ ಪ್ರೌಢಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳ ಮುಖ್ಯೋಪಾಧ್ಯಾಯರು ಹಾಗೂ ಪ್ರಾಚಾರ್ಯರಾಗಿ ನೇಮಕಗೊಂಡು ಕರ್ತವ್ಯಕ್ಕೆ ಹಾಜರಾದ ಶಿಕ್ಷಕರುಗಳಿಗೆ ವಿಶೇಷ ಭತ್ಯೆ ನೀಡಲು ಅವಕಾಶವಿರುವುದಿಲ್ಲ. |
| ಆ) | ಅದನ್ನು ಒಂದು ಇನ್‌ಕ್ರಿಮೆಂಟ್ ಎಂದು ಪರಿಗಣಿಸಿ ಮೂಲ ವೇತನದಲ್ಲಿ ಸೇರಿಸುವ ಕುರಿತು ಸರ್ಕಾರದ ಕ್ರಮವೇನು? | ದಿನಾಂಕ:01/08/2008ರ ಪೂರ್ವದಲ್ಲಿ ನೇಮಕಾತಿ ಹೊಂದಿದ ಪ್ರೌಢಶಾಲಾ ಶಿಕ್ಷಕರಿಗೆ ವಿಶೇಷ ಭತ್ಯೆಯನ್ನು ನೀಡಿ ಮೂಲ ವೇತನದಲ್ಲಿ ವಿಲೀನಗೊಳಿಸಲಾಗಿದೆ.<br>ದಿನಾಂಕ:01/08/2008ರ ನಂತರ ಪ್ರೌಢಶಾಲೆಗಳಿಗೆ ನೇಮಕಗೊಂಡು ಕರ್ತವ್ಯಕ್ಕೆ ಹಾಜರಾದ ಶಿಕ್ಷಕರುಗಳು ಈ ಸೌಲಭ್ಯ ಅರ್ಹರಿರುವುದಿಲ್ಲ. |

ಸಂಖ್ಯೆ: ಇಪಿ 73 ಎಸ್‌ಎಲ್‌ಬಿ 2021

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು